7. ಆಹಾರ ಇಲಾಖೆಯ ರಾಜ್ಯ ಗ್ರಾಹಕರ ಸಹಾಯವಾಣಿ ಮೂಲಕ ಗ್ರಾಹಕರಿಂದ ಬರುವ ದೂರುಗಳಿಗೆ ತಕ್ಷಣ ಕ್ರಮವಹಿಸಿ ಮತ್ತು ಮಾಹಿತಿ ನೀಡಿ ಗ್ರಾಹಕರಿಗೆ ಜಾಗೃತಿ ಮೂಡಿಸಲಾಗುತ್ತಿದೆ.

ಈ) ಆಹಾರ ಇಲಾಖೆಯ ಅಧಿಕಾರಿಗಳು ಹಾಗೂ ಗ್ರಾಹಕ ಸೇವಾ ಸಂಸ್ಥೆಗಳ ಪ್ರತಿನಿಧಿಗಳಿಗೆ ಇ–ಗ್ರಾಹಕರ ಸಂರಕ್ಷಣೆಯ ವಿಚಾರದಲ್ಲಿ ಈ ಕ್ಷೇತ್ರದಲ್ಲಿ ಪರಿಣಿತರಾಗಿರುವ ಸಂಪನ್ಮೂಲ ವ್ಯಕ್ತಿಗಳಿಂದ ವಿಶ್ವ ಗ್ರಾಹಕರ ದಿನಾಚರಣೆಯ ಅಂಗವಾಗಿ ದಿನಾಂಕ 14–03–2015ರಂದು ಕಾರ್ಯಾಗಾರ ಏರ್ಪಡಿಸಲಾಯಿತು. ಇದೇ ರೀತಿ ಮುಂದೆಯೂ ಹಸ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು.

ಗ್ರಾಹಕರ ವ್ಯವಹಾರಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ನಿರ್ದೇಶನಾಲಯವನ್ನು ಸ್ಥಾಪಿಸುವ ಬಗ್ಗೆ ಆಯುಕ್ತಲಾಯದಿಂದ ಸರ್ಕಾರದಲ್ಲಿ ಪ್ರಸ್ತಾವನೆ ಸ್ವೀಕೃತವಾಗಿದ್ದು ಅದು ಪರಿಶೀಲನೆ ಹಂತದಲ್ಲಿದೆ.

ಸುಳ್ಳು ಜಾತಿ ಪ್ರಮಾಣ ಪತ್ರ

3276 (3544); ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ)

ಅ) ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಉದ್ಯೋಗ ಮತ್ತು ಶೈಕ್ಷಣಿಕ ಮೀಸಲಾತಿ ಪಡೆದು ಅರ್ಹ ಫಲಾನುಭವಿಗಳಿಗೆ ಪರೋಕ್ಷವಾಗಿ ಅನ್ಯಾಯ ಮಾಡಿದವರನ್ನು ಗುರುತಿಸಲು ಕೈಗೊಂಡ ಕ್ರಮಗಳೇನು; ಉದ್ಯೋಗ ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ಎಷ್ಟು ಜನ ಅಕ್ರಮ ಪ್ರವೇಶ ಪಡೆದವರನ್ನು ಗುರುತಿಸಲಾಗಿದೆ;

ಆ) ಕಳೆದರಡು ವರ್ಷಗಳಲ್ಲಿ ಸರಕಾರಿ ನೌಕರಿಯನ್ನು ಹೊಂದಿರುವ ಎಷ್ಟು ಜನರನ್ನು ಇಲಾಖೆ ಗುರುತಿಸಿ ಕ್ರಮ ಜರುಗಿಸಿದೆ;

ಇ) ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯವನ್ನು ಸುವ್ಯವಸ್ಥೆಗೊಳಿಸಿ ಇಂಥ ಪ್ರಕರಣಗಳು ನಡೆಯದಂತೆ ಪ್ರತಿಬಂಧಿಸುವ ಮತ್ತು ಅರ್ಹರಿಗೆ ಮಾತ್ರ ಜಾತಿ ಪ್ರಮಾಣ ಪತ್ರ ನೀಡಲು ಕೈಗೊಳ್ಳುವ ಕ್ರಮಗಳೇನು?

ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಉದ್ಯೋಗ ಮತ್ತು ಶೈಕ್ಷಣಿಕ ಮೀಸಲಾತಿ ಪಡೆದವರ ವಿರುದ್ಧ ದೂರು / ಮಾಹಿತಿ ಸಿಕ್ಕ ತಕ್ಷಣವೇ ವಿಚಾರಣೆ ಕೈಗೊಳ್ಳಲಾಗುತ್ತಿದೆ. ವಿಚಾರಣೆ ಸಾಬೀತಾದಲ್ಲಿ ಸುಳ್ಳು ಜಾತಿ ಪ್ರಮಾಣ ಪತ್ರವನ್ನು ರದ್ದುಪಡಿಸಿ, ಅವರ ವಿರುದ್ಧ ಎಫ್.ಐ.ಆರ್ ದಾಖಲಿಸಿ, ಆರೋಪಿತರನ್ನು ಬಂಧಿಸಿ ಸೇವೆಯಿಂದ ವಜಾಗೊಳಿಸಲು ಕ್ರಮಕೈಗೊಂಡು ಅವರ ಆರ್ಥಿಕ ಸೌಲಭ್ಯವನ್ನು ಹಿಂಪಡೆಯಲು ಕ್ರಮಕೈಗೊಳ್ಳಲಾಗುತ್ತಿದೆ. ಉದ್ಯೋಗ ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ಒಟ್ಟು 619 ಜನರು ಅಕ್ರಮ ಪ್ರವೇಶ ಪಡೆದಿರುವುದು ಸಾಬೀತಾಗಿರುತ್ತದೆ.

ಆ) ಕಳೆದೆರಡು ವರ್ಷಗಳಲ್ಲಿ ಒಟ್ಟು 54 ಜನ ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಸರ್ಕಾರಿ ನೌಕರಿಯನ್ನು ಹೊಂದಿರುವವರನ್ನು ಗುರುತಿಸಿ ಅಂತಹವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗಿದೆ.

ಇ) ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯದ ಎಲ್ಲಾ ಪ್ರಾದೇಶಿಕ ಎಸ್.ಪಿ.ಗಳು ತಮ್ಮ ವ್ಯಾಪ್ತಿಗೆ ಬರುವ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಮತ್ತು ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳನ್ನು ಭೇಟಿ ಮಾಡಿ ಜಾತಿ ಪ್ರಮಾಣ ಪತ್ರವನ್ನು ನೀಡುವಾಗ ಕೂಲಂಕಷವಾಗಿ ಪರಿಶೀಲನೆ ನಡೆಸಿ ನಂತರ ಜಾತಿ ಪ್ರಮಾಣ ಪತ್ರವನ್ನು ನೀಡುವಂತೆ ಸೂಚಿಸಿ ತಹಶೀಲ್ದಾರರವರಿಗೆ ಸೂಕ್ತ ಮಾರ್ಗದರ್ಶನ ನೀಡುವಂತೆ ಮಾಸಿಕ ಸಭೆಯಲ್ಲಿ ಚರ್ಚೆ ನಡೆಸಿರುತ್ತಾರೆ.

ಪ್ರಾದೇಶಿಕವಾಗಿ ಸೂಕ್ಷ್ಮ ಮತ್ತು ಗೊಂದಲವಿರುವ ಜಾತಿ ಹಾಗೂ ನ್ಯಾಯಾಲಯದಲ್ಲಿ ಇತ್ಯರ್ಥವಾಗಲು ಬಾಕಿ ಇರುವ ಜಾತಿಗಳ ಬಗ್ಗೆ

ತಹಶೀಲ್ದಾರರು ತಮ್ಮ ಅಧೀನ ಅಧಿಕಾರಿಗಳಿಂದ ಶಿಫಾರಸ್ಸುಗೊಂಡ ಜಾತಿಯನ್ನು ನೇರವಾಗಿ ಅಂಗೀಕೃತಗೊಳಿಸದೇ, ಜಾತಿಯ ಸೂಕ್ಷ್ಮತೆಯನ್ನು ಅರಿತು ನೇರವಾಗಿ ವಿಚಾರಣೆ ಮಾಡಿ ನಂತರ ಜಾತಿ ಪ್ರಮಾಣ ಪತ್ರವನ್ನು ನೀಡಿದ್ದಲ್ಲಿ ಸದರಿ ಸಮಸ್ಯೆಗೆ ಸೂಕ್ತ ಪರಿಹಾರ ಕಂಡುಕೊಳ್ಳಲು ಸಾಧ್ಯವಿರುತ್ತದೆ.

ಬಿ.ಎಂ.ಟಿ.ಸಿ. ಬಸ್ ಸೌಲಭ್ಯ

3277 (3545); ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ)

ಅ) ಶಾಲಾ ವಿದ್ಯಾರ್ಥಿಗಳಿಗೆ ಹಾಗೂ ಗಾರ್ಮೆಂಟ್ಸ್‌ಗಳಲ್ಲಿ ಕೆಲಸ ಮಾಡುವ ಮಹಿಳೆಯರ ಸಂಚಾರಕ್ಕೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯವರು ಒದಗಿಸಿಕೊಟ್ಟಿರುವ ಬಸ್‌ಗಳ ಸಂಖ್ಯೆ ಮತ್ತು ಅದರಲ್ಲಿ ಒದಗಿಸಿಕೊಡಲಾದ ಸುರಕ್ಷತಾ ಕ್ರಮಗಳಾವುವು;

ಆ) ಮಹಿಳಾ ಪ್ರಯಾಣಿಕರ ಸುರಕ್ಷಾ ಕ್ರಮಗಳು ಹಾಗೂ ಎಷ್ಟು ಬಸ್‌ಗಳಲ್ಲಿ ಸಿಸಿ ಕ್ಯಾಮರಾಗಳನ್ನು ಒದಗಿಸಿಕೊಡಲಾಗಿದೆ; ಎಲ್ಲಾ ಬಿಎಂಟಿಸಿ ಬಸ್‌ಗಳಲ್ಲಿಯೂ ಸಿಸಿ ಕ್ಯಾಮರ ಅಳವಡಿಸಲು ಸರ್ಕಾರ ಕ್ರಮ ಕೈಗೊಂಡಿದೆಯೆ;

ಇ) ಶಾಲಾ ವಿದ್ಯಾರ್ಥಿಗಳಿಗಾಗಿ ಕೋರಿಕೆ ಮೇರೆಗೆ ನಿಲುಗಡೆ ನಿಲ್ದಾಣಗಳನ್ನು ವ್ಯವಸ್ಥೆಗೊಳಿಸಲು ಕೈಗೊಂಡ ಕ್ರಮಗಳು ಯಾವುವು; ಗಾರ್ಮೆಂಟ್ಸ್ ಮಹಿಳೆಯರಿಗೆ ಸಂಚಾರ ಶುಲ್ಕದಲ್ಲಿ ನೀಡಲಾಗುವ ರಿಯಾಯಿತಿ ಸೌಲಭ್ಯಗಳಾವುವು?

ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಸಚಿವರು)

ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಶಾಲಾ ವಿದ್ಯಾರ್ಥಿಗಳ ಸೌಲಭ್ಯಕ್ಕಾಗಿ 38 ಖಾಸಗಿ ಶಾಲೆಗಳಿಗೆ ಖಾಯಂ ಗುತ್ತಿಗೆ ಆಧಾರದ ಮೇಲೆ 211 ಬಸ್ಸುಗಳನ್ನು ನೀಡಿರುತ್ತದೆ. ಮಕ್ಕಳ ಸುರಕ್ಷತೆಯನ್ನು ಗಮನದಲ್ಲಿರಿಸಿಕೊಂಡು ಉತ್ತಮ ತಾಂತ್ರಿಕ ಸ್ಥಿತಿಯಲ್ಲಿರುವ